# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ | : | 526 |
| 2 | ಸದಸ್ಯರ ಹೆಸರು | : | ಶ್ರೀ ಎಸ್.ಎಲ್.ಭೋಜೇಗೌಡ<br>(ಶಿಕ್ಷಕರ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | : | 11-12-2025 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಎಎಸ್ಐ ಹುದ್ದೆಯಿದ ಪಿಎಸ್ಐ ಹುದ್ದೆಗೆ ಮುಂಬಡ್ತಿ ನೀಡಲು ಬಾಕಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಮತ್ತು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು; (ಸಂಪೂರ್ಣವಾದ ಮಾಹಿತಿ ನೀಡುವುದು) | ಬೆಂಗಳೂರು ನಗರದಲ್ಲಿ ಎಎಸ್ಐ ಹುದ್ದೆಯಿಂದ ಪಿಎಸ್ಐ ಹುದ್ದೆಗೆ ಮುಂಬಡ್ತಿ ನೀಡಲು ಒಟ್ಟು 11 ಹುದ್ದೆಗಳು ಬಾಕಿ ಇರುತ್ತದೆ. ಸದರಿ ಘಟಕದಲ್ಲಿನ ಮುಂಬಡ್ತಿ ಹುದ್ದೆಗಳನ್ನು ರಿಕ್ತಸ್ಥಾನಗಳ ಅನುಗುಣವಾಗಿ ಕಾಲಕಾಲಕ್ಕೆ ಮುಂಬಡ್ತಿ ನೀಡಿ ಭರ್ತಿ ಮಾಡಲಾಗುತ್ತಿದ್ದು, ಪ್ರಸ್ತುತ ಬಾಕಿಯಿರುವ ಹುದ್ದೆಗಳನ್ನು ಭರ್ತಿಮಾಡಲು ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. |
| ಆ) | ರಾಜ್ಯದಲ್ಲಿ ಬೇರೆ ಬೇರೆ ಸರ್ಕಾರಿ ಇಲಾಖೆಯಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಶೇ. 50/50 ರಷ್ಟು ಇದ್ದು, ಪೊಲೀಸ್ ಇಲಾಖೆಯಲ್ಲಿ ಮಾತ್ರ ಶೇ 70/30 ರಷ್ಟು ಇರುವುದರಿಂದ ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಚಿಂತಿಸಿದೆಯೇ; ಇಲ್ಲದಿದ್ದಲ್ಲಿ ಈ ತಾರತಮ್ಯವನ್ನು ಸರಿಪಡಿಸುವಲ್ಲಿ ಸರ್ಕಾರದಿಂದ ಯಾವ ಕ್ರಮವನ್ನು ಕೈಗೊಳ್ಳಲಾಗುವುದು ಹಾಗೂ ಯಾವ ಕಾಲ ಮಿತಿಯೊಳಗೆ ಈ ತಾರತಮ್ಯವನ್ನು ಸರಿಪಡಿಸಲಾಗುವುದು; | ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಪಿ.ಎಸ್.ಐ (ಸಿವಿಲ್) ಹುದ್ದೆಯು ಪ್ರಮುಖ ಹುದ್ದೆಯಾಗಿದ್ದು, ಸಂಬಂಧಪಟ್ಟ ಠಾಣಾ ವ್ಯಾಪ್ತಿಯ ಸಂಪೂರ್ಣ ಕಾನೂನು ಮತ್ತು ಸುವ್ಯವಸ್ಥೆಯ ನಿರ್ವಹಣೆ, ಅಪರಾಧ ತಡೆಗಟ್ಟುವಿಕೆ, ಅಪರಾಧ ಪ್ರಕರಣಗಳ ಪತ್ತೆ ಮತ್ತು ತನಿಖೆ, ಸಂಚಾರ ನಿರ್ವಹಣೆಯು ಇವರ ಮುಖ್ಯ ಕರ್ತವ್ಯವಾಗಿರುತ್ತದೆ. ಈ ಕರ್ತವ್ಯಗಳನ್ನು ನಿರ್ವಹಿಸಲು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರಾದ ಹಾಗೂ ತಾಂತ್ರಿಕ ನೈಪುಣ್ಯತೆಯುಳ್ಳ ಯುವ ಅಧಿಕಾರಿಗಳ ಅವಶ್ಯಕತೆ ಇರುತ್ತದೆ. ಅಲ್ಲದೇ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಿನ ತಾಂತ್ರಿಕತೆಯಿಂದ ಕೂಡಿದ್ದು, ಇಂತಹ ಪ್ರಕರಣಗಳ ಪತ್ತೆಗೆ ಹೆಚ್ಚಿನ ತಾಂತ್ರಿಕ ವಿದ್ಯಾರ್ಹತೆಯುಳ್ಳ ಯುವಕರ ಅವಶ್ಯಕತೆ ಇರುತ್ತದೆ.<br><br>ಸಾಮಾನ್ಯವಾಗಿ ಪೊಲೀಸ್ ಕಾನ್ಸ್‌ಟೇಬಲ್ ವೃಂದದ ಸಿಬ್ಬಂದಿಗಳು ಕ್ರಮವಾಗಿ ಹೆಡ್ ಕಾನ್ಸ್ ಟೇಬಲ್ ಮತ್ತು ಎಎಸ್ಐ ಹುದ್ದೆಗಳಿಗೆ 02 ಮುಂಬಡ್ತಿಯನ್ನು ಹೊಂದಿ ನಂತರ ಪಿ.ಎಸ್.ಐ(ಸಿವಿಲ್) ಹುದ್ದೆಗೆ ಅರ್ಹರಾಗುತ್ತಾರೆ. ಇವರ ಶಿಕ್ಷಣವು ಮೂಲ ಹುದ್ದೆಯ ಕನಿಷ್ಟ ಮಟ್ಟದ್ದಾಗಿರುವುದರಿಂದ ಪ್ರಸ್ತುತ |

| | | |
|---|---|---|
| | | ವರದಿಯಾಗುತ್ತಿರುವ ಹೆಚ್ಚಿನ ತಾಂತ್ರಿಕತೆಅಪರಾಧ ಪ್ರಕರಣ ಭೇದಿಸುವುದು ಕಷ್ಟಸಾಧ್ಯವಾಗಿರುತ್ತದೆ.<br><br>ಪೊಲೀಸ್ ಇಲಾಖೆಯ ಕಾರ್ಯ ನಿರ್ವಹಣೆ ಹಾಗೂ ಇತರ ಇಲಾಖೆಗಳ ಕಾರ್ಯನಿರ್ವಹಣೆಗೂ ಸಾಕಷ್ಟು ವ್ಯತ್ಯಾಸವಿರುವುದರಿಂದ ಪೊಲೀಸ್ ಇಲಾಖೆಯ ಪಿಎಸ್ಐ ಹುದ್ದೆಯನ್ನು ಇತರ ಇಲಾಖೆಯ ಹುದ್ದೆಗಳೊಂದಿಗೆ ಹೋಲಿಸುವುದು ಸೂಕ್ತವಾಗಿರುವುದಿಲ್ಲ. ಈ ಹಿನ್ನಲೆಯಲ್ಲಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪಿಎಸ್ಐ ಹುದ್ದೆಗೆ ಅನುಭವವುಳ್ಳ ಮತ್ತು ಯುವ ಅಧಿಕಾರಿಗಳನ್ನು ಪರಿಗಣಿಸಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡ 70:30ರ ಅನುಪಾತವನ್ನು ನಿಗದಿಪಡಿಸಲಾಗಿದ್ದು, ಸದರಿ ಅನುಪಾತ ನಿಗದಿಯು ಇಲಾಖೆಯ ಕಾರ್ಯನಿರ್ವಹಣೆ ಮತ್ತು ಆಡಳಿತಕ್ಕೆ ಪೂರಕವಾಗಿರುತ್ತದೆ. |
| **ಇ)** | ಅಗ್ನಿಶಾಮಕ ಮತ್ತು ಕಾರಾಗೃಹ ಇಲಾಖೆಯಲ್ಲಿ ಎಎಸ್ಐ ಮತ್ತು ಪಿಎಸ್ಐ ವಾರ್ಷಿಕ ಗೆಜೆಟೆಡ್ 30 ದಿನಗಳ ವೇತನವನ್ನು ಪಡೆಯುತ್ತಿದ್ದು ಪೊಲೀಸ್ ಇಲಾಖೆಯಲ್ಲಿ ಎಎಸ್ಐ ಮತ್ತು ಪಿಎಸ್ಐರವರಿಗೆ ರವರಿಗೆ ಕೇವಲ ಗೆಜೆಟೆಡ್ 15 ದಿನಗಳ ವೇತನವನ್ನು ಪಡೆಯುತ್ತಿದ್ದರಿಂದ ಸಾರ್ವಜನಿಕರಿಗೆ ಹೆಚ್ಚು ಹತ್ತಿರವಾಗಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಇಲಾಖೆಗೆ ಗೆಜೆಟೆಡ್ 30 ದಿನಗಳ ವೇತನವನ್ನು ನೀಡಲು ಸರ್ಕಾರ ಯಾವ ಕಾಲ ಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಪ್ರಸ್ತುತ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಕೆಲವು ನಿರ್ದಿಷ್ಟ ವೃಂದದ ಸಿಬ್ಬಂದಿಗಳನ್ನೂ ಒಳಗೊಂಡಂತೆ ಪೊಲೀಸ್ ಇಲಾಖೆಯ ಪೊಲೀಸ್ ಕಾನ್‌ಸ್ಟೇಬಲ್ ಮತ್ತು ಹೆಡ್ ಕಾನ್‌ಸ್ಟೇಬಲ್ ವೃಂದದ ಸಿಬ್ಬಂದಿಗಳಿಗೆ ಅವರು ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ 30 ದಿನಗಳ ಹೆಚ್ಚುವರಿ ವೇತನವನ್ನು ಪಾವತಿಸಲು ಅವಕಾಶವಿರುತ್ತದೆ.<br><br>ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಲಭ್ಯವಿರುವ ಪತ್ರಾಂಕಿತ ರಜಾ ವೇತನದ ಸೌಲಭ್ಯವೂ ಸೇರಿದಂತೆ ಸರ್ಕಾರಿ ನೌಕರರ ವಿಶೇಷ ಭತ್ಯೆಯ ಪರಿಷ್ಕರಣೆಯು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿರುತ್ತದೆ.<br>ಪೊಲೀಸ್ ಇಲಾಖೆಯ ಎ.ಎಸ್.ಐ ಮತ್ತು ಸಿಬ್ಬಂದಿಗಳು ಪಿ.ಎಸ್.ಐ ವೃಂದದ ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ ಪ್ರಸ್ತುತ ಲಭ್ಯವಿರುವ 15 ದಿವಸಗಳ ವೇತನವನ್ನು 30 ದಿವಸಗಳ ವೇತನಕ್ಕೆ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.<br>. |

ಸಂಖ್ಯೆ: ಒಇ 348 ಪಿಇಐ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು